# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1318

ಉತ್ತರ ದಿನಾಂಕ : 24.12.2021

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯ ಅನುದಾನದಡಿ 3 ವರ್ಷಗಳಲ್ಲಿ ಚನ್ನರಾಯಪಟ್ಟಣ ತಾಲ್ಲೂಕಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು) | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಅನುದಾನವನ್ನು ವಿಭಾಗವಾರು ಮಂಜೂರು ಮಾಡಲಾಗುವುದು. ಆದ್ದರಿಂದ ವೆಚ್ಚವನ್ನು ಬಿಡುಗಡೆಯಾಗಿರುವ ಅನುದಾನವೆಂದು ಪರಿಗಣಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿವೆ.<br>ವರ್ಷ / ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ)<br>2018–19 / 1190.63<br>2019–20 / 1254.00<br>2020–21 / 3423.14<br>ಒಟ್ಟು / 5867.77 |
| ಆ) | ಈ ಅನುದಾನದಡಿ ಕಳೆದ 3 ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಈ ಕಾಮಗಾರಿಗಳು ಯಾವ ಹಂತದಲ್ಲಿವೆ; (ಗುತ್ತಿಗೆದಾರರ ವಿವರಗಳೊಂದಿಗೆ ಮಾಹಿತಿ ನೀಡುವುದು) | ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿವಾರು, ಖರ್ಚಾದ ಅನುದಾನ ಗುತ್ತಿಗೆದಾರರ ವಿವರಗಳನ್ನು **ಅನುಬಂಧ-1(ಅ), (ಆ), (ಇ)** ರಲ್ಲಿ ಲಗತ್ತಿಸಿದೆ. |
| ಇ) | ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ನಿರ್ವಹಿಸಲಾಗುತ್ತಿರುವ ಕಾಮಗಾರಿಗಳು ತುಂಬಾ ವಿಳಂಬವಾಗುತ್ತಿರುವುದರಿಂದ, ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೆನೆಗುದಿಗೆ ಬಿದ್ದಿರುವ ಕಾಮಗಾರಿಗಳು ಯಾವುವು ಈ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ನಿರ್ವಹಿಸುತ್ತಿರುವ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂ:ಗ್ರಾಕುನೀ&ನೈಇ 336 ಗ್ರಾನೀಸ(4)2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು